# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 797 |
| ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭಾ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 12.12.2025. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಸಿಂಧನೂರು ತಾಲ್ಲೂಕಿನಲ್ಲಿ ಪ್ರಸ್ತುತ ಖಾಲಿಯಿರುವ ವಿವಿಧ ಗ್ರಾಮ ಪಂಚಾಯಿತಿಗಳ ಪಿಡಿಓ ಹಾಗೂ ಕಾರ್ಯದರ್ಶಿ ಗ್ರೇಡ್-1 ಹುದ್ದೆಗಳ ಸಂಖ್ಯೆ ಎಷ್ಟು;</td><td>ಸಿಂಧನೂರು ತಾಲ್ಲೂಕಿನ ಗ್ರಾಮ ಪಂಚಾಯಿತಿಗಳಿಗೆ ಮಂಜೂರಾದ, ಭರ್ತಿಯಾದ ಹಾಗೂ ಖಾಲಿ ಇರುವ ಹುದ್ದೆಗಳ ವಿವರ ಈ ಕೆಳಕಂಡಂತಿದೆ.<br>
<table>
<tr><th>ಕ್ರ. ಸಂ</th><th>ಹುದ್ದೆ</th><th>ಮಂಜೂರು</th><th>ಭರ್ತಿ</th><th>ಖಾಲಿ</th></tr>
<tr><td>1.</td><td>ಪಂಚಾಯಿತಿ ಅಭಿವೃದ್ಧಿ ಅಧಿಕಾರಿ</td><td>30</td><td>27</td><td>03</td></tr>
<tr><td>2.</td><td>ಗ್ರಾಮ ಪಂಚಾಯಿತಿ ಕಾರ್ಯದರ್ಶಿ (ಗ್ರೇಡ್-1)</td><td>18</td><td>03</td><td>15</td></tr>
</table></td></tr>
<tr><td>(ಆ)</td><td>ಹುದ್ದೆಗಳು ಖಾಲಿಯಿರುವುದರಿಂದ ಸಾರ್ವಜನಿಕರಿಗೆ ಸರ್ಕಾರದ ಸೌಲಭ್ಯಗಳು ದೊರೆಯುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಈ ಸಂಬಂಧ ಕೈಗೊಂಡಿರುವ ಕ್ರಮವೇನು;</td><td>ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 384 ಗ್ರಾಪಂಕಾ 2018(ಭಾಗ-1) ದಿನಾಂಕ:23.11.2018 ರಲ್ಲಿ ಗ್ರಾಮ ಪಂಚಾಯತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆ ನಿವೃತ್ತಿ, ಅಮಾನತ್ತು ಹಾಗೂ ಇನ್ನಿತರ ಕಾರಣಗಳಿಗೆ ತೆರವಾದಲ್ಲಿ ಸದರಿ ಗ್ರಾಮ ಪಂಚಾಯತಿಯಲ್ಲಿ ಗ್ರೇಡ್-1 ಕಾರ್ಯದರ್ಶಿ ಪೂರ್ಣ ಕಾಲಿಕವಾಗಿ ಕಾರ್ಯನಿರ್ವಹಿಸುತ್ತಿದ್ದಲ್ಲಿ ಅವರಿಗೆ ಪ್ರಭಾರ ವಹಿಸಲು ಹಾಗೂ ಪೂರ್ಣಕಾಲಿಕ ಗ್ರೇಡ್-1 ಕಾರ್ಯದರ್ಶಿ ಇಲ್ಲದಿದ್ದಲ್ಲಿ ನೆರೆಯ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಗೆ ಹೆಚ್ಚುವರಿ ಪ್ರಭಾರ ವಹಿಸಲು ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದ್ದು, ಜನಸಾಮಾನ್ಯರಿಗೆ ಸರ್ಕಾರದ ಯೋಜನೆಗಳನ್ನು ಸಮಯಕ್ಕೆ ಸರಿಯಾಗಿ ತಲುಪಿಸಲು ಮತ್ತು ಆಡಳಿತವನ್ನು ಸುಗಮವಾಗಿ ನಡೆಸಲು ಅಗತ್ಯ ಕ್ರಮ ವಹಿಸಲಾಗಿರುತ್ತದೆ.</td></tr>
</table>

| | | |
|---|---|---|
| (ಇ) | ಯಾವ ಕಾಲಮಿತಿಯೊಳಗೆ ಈ ಎಲ್ಲಾ ಖಾಲಿ ಹುದ್ದೆಗಳನ್ನು ಸರ್ಕಾರದಿಂದ ಭರ್ತಿ ಮಾಡಲಾಗುವುದು? | ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ 247 ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ವೃಂದದ ಹುದ್ದೆಗಳ ನೇಮಕಾತಿಗೆ ಕರ್ನಾಟಕ ಲೋಕ ಸೇವಾ ಆಯೋಗದಿಂದ ದಿನಾಂಕ:15.03.2024 ರಂದು ಅಧಿಸೂಚನೆಯನ್ನು ಮತ್ತು 17.09.2024 ರಲ್ಲಿ ತಿದ್ದುಪಡಿ ಅಧಿಸೂಚನೆಗಳನ್ನು ಹೊರಡಿಸಿದ್ದು ದಿನಾಂಕ:16.11.2024 ಮತ್ತು 17.11.2024 ರಂದು ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳಿಗೆ ಮತ್ತು ಉಳಿಕೆ ಮೂಲ ವೃಂದದ ಹುದ್ದೆಗಳಿಗೆ ದಿನಾಂಕ: 07.12.2024 ಮತ್ತು 08.12.2024 ರಂದು ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗಿರುತ್ತದೆ,<br><br>ಮುಂದುವರೆದು ದಾಖಲೆಗಳ ಪರಿಶೀಲನೆಗಾಗಿ 1:3 ಅನುಪಾತದಲ್ಲಿ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಕಲ್ಯಾಣ ಕರ್ನಾಟಕ ವೃಂದಕ್ಕೆ ಸಂಬಂಧಿಸಿದಂತೆ ದಿನಾಂಕ: 08.07.2025 ರಂದು ಮತ್ತು ಉಳಿಕೆ ವೃಂದಕ್ಕೆ ಸಂಬಂಧಿಸಿದಂತೆ 20.08.2025 ರಂದು ಪ್ರಕಟಿಸಿದ್ದು, ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲು ಬಾಕಿ ಇರುತ್ತದೆ. ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br><br>ಮುಂಬಡ್ತಿ ಕೋಟಾದಡಿ ಖಾಲಿ ಇರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳಿಗೆ ಸಂಬಂಧಿಸಿದಂತೆ ದಿನಾಂಕ:01.01.2025 ರಲ್ಲಿದ್ದಂತೆ ಗ್ರೇಡ್-1 ಕಾರ್ಯದರ್ಶಿಗಳ ರಾಜ್ಯ ಮಟ್ಟದ ಕರಡು ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು ಸ್ವೀಕೃತಗೊಂಡಿರುವ ಆಕ್ಷೇಪಣೆಗಳನ್ನು ಪರಿಶೀಲಿಸಲಾಗಿರುತ್ತದೆ. ರಾಜ್ಯ ಮಟ್ಟದ ಅಂತಿಮ ಜೇಷ್ಠತಾ ಪಟ್ಟಿ ಪ್ರಕಟಿಸಲು ಪರಿಶೀಲನೆಯಲ್ಲಿದ್ದು, ಮುಂಬಡ್ತಿ ಕೋಟಾದಡಿಯಲ್ಲಿ ಖಾಲಿ ಇರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ಅನಂತರದಲ್ಲಿ ಭರ್ತಿ ಮಾಡಬೇಕಿರುತ್ತದೆ.<br><br>ರಾಜ್ಯದಲ್ಲಿ ನೇರನೇಮಕಾತಿ ಕೋಟಾದಡಿ ಖಾಲಿ ಇದ್ದ 212 ಗ್ರೇಡ್-1 ಕಾರ್ಯದರ್ಶಿ, 298 ಗ್ರೇಡ್-2 ಕಾರ್ಯದರ್ಶಿ 87 ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆಗಳಿಗೆ ನೇಮಕಾತಿಗಾಗಿ ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ನೇರ ಮೀಸಲಾತಿ ಕುರಿತಂತೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣ ಬಾಕಿ ಇದ್ದು ಪ್ರಕರಣ ಇತ್ಯರ್ಥಗೊಂಡ ನಂತರ ಖಾಲಿ ಇರುವ ಕಾರ್ಯದರ್ಶಿ (ಗ್ರೇಡ್-1 & 2) ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆಗಳ ನೇಮಕಾತಿ ಮಾಡಲು ಕ್ರಮ ವಹಿಸಲಾಗುವುದು. |

**ಸಂಖ್ಯೆ:** ಗ್ರಾಅಪ 953 ಗ್ರಾಪಂಅ 2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.